**ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು-560 003.**

ಸಂಖ್ಯೆ:ಎಕ್ಸ್1:ಡ್ರಾ.ಗ್ರೇ.ಪ./ನವೆಂಬರ್-2019/01/2019-20

ದಿನಾಂಕ: 16.12.2019

**ಸುತ್ತೋಲೆ**

ವಿಷಯ: ನವೆಂಬರ್-2019ರಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಫಲಿತಾಂಶ ಪ್ರಕಟಣೆ ಬಗ್ಗೆ.

****

ನವೆಂಬರ್-2019ರಲ್ಲಿ ನಡೆದ ಡ್ರಾಯಿಂಗ್ ಗ್ರೇಡ್ (ಲೋಯರ್ ಮತ್ತು ಹೈಯರ್) ಪರೀಕ್ಷೆಯ ಫಲಿತಾಂಶವನ್ನು ಈಗಾಗಲೇ ಆನ್‌ಲೈನ್ ಮೂಲಕ ಪ್ರಕಟಿಸಲಾಗಿದೆ.

ವಿದ್ಯಾರ್ಥಿಗಳ ವೈಯಕ್ತಿಕ ವಿವರಗಳಲ್ಲಿ ವಿದ್ಯಾರ್ಥಿಯ ಹೆಸರು/ತಂದೆ/ತಾಯಿಯ ಹೆಸರಿನಲ್ಲಿ ಏನಾದರೂ ವ್ಯತ್ಯಾಸವಿದ್ದಲ್ಲಿ ವಿದ್ಯಾರ್ಥಿ ಓದುತ್ತಿರುವ ಮೂಲ ಶಾಲೆಯ SATS ನಲ್ಲಿ ಸರಿಪಡಿಸಿ ಮಾಹಿತಿಯನ್ನು ಮಂಡಳಿಗೆ ದಿನಾಂಕ: 30.12.2019ರೊಳಗೆ ಕಳುಹಿಸುವುದು.

ವಿದ್ಯಾರ್ಥಿಯ ಭಾವಚಿತ್ರ ಮತ್ತು ಸಹಿ ವ್ಯತ್ಯಾಸವಿದ್ದಲ್ಲಿ ಸದರಿ ವಿದ್ಯಾರ್ಥಿಗಳ ಫೋಟೋ ಮತ್ತು ಸಹಿಯನ್ನು ಶಾಲಾ ಮುಖ್ಯಸ್ಥರಿಂದ ದೃಢೀಕರಿಸಿ ಸಕಾರಣದೊಂದಿಗೆ ಮಂಡಳಿಗೆ ಸಲ್ಲಿಸುವುದು.

ಉತ್ತರಪತ್ರಿಕೆ ಛಾಯಾ ಪ್ರತಿ ಮತ್ತು ಮರುಎಣಿಕೆಯನ್ನು ಬಯಸುವ ಅಭ್ಯರ್ಥಿಗಳ ಅರ್ಜಿಯನ್ನು ಮಂಡಳಿ ನಿಗದಿಪಡಿಸಿದ ನಮೂನೆಯಲ್ಲಿ ಭರ್ತಿ ಮಾಡಿ ನಿಗಧಿತ ಶುಲ್ಕವನ್ನು ಇತರೆ ಪರೀಕ್ಷೆಗಳ ನೆಫ್ಟ್ ಚಲನ್ ಮೂಲಕ ಪಾವತಿಸಿ ದಿನಾಂಕ:27.12.2019ರೊಳಗೆ ಮಂಡಳಿಗೆ ಸಲ್ಲಿಸುವುದು. ನಿಗದಿಪಡಿಸಿದ ದಿನಾಂಕದ ನಂತರ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

1. ಛಾಯಾಪ್ರತಿ ಶುಲ್ಕ ರೂ.300/-ಗಳು
2. ಮರುಎಣಿಕೆಯ ಶುಲ್ಕ ರೂ.150/-ಗಳು

ಛಾಯಾಪ್ರತಿ ಮತ್ತು ಮರುಎಣಿಕೆಯ ಅರ್ಜಿಗಳು ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯ ಅಂತರ್ಜಾಲ www.kseeb.kar.nic.in ನಲ್ಲಿ ಲಭ್ಯವಿದೆ.

ಛಾಯಾಪ್ರತಿಯನ್ನು ಇ-ಮೇಲ್ ವಿಳಾಸಕ್ಕೆ ಕಳುಹಿಸುತ್ತಿದ್ದು, ವಿದ್ಯಾರ್ಥಿ/ಪೋಷಕರು ಅಥವಾ ಶಿಕ್ಷಕರ ಇ-ಮೇಲ್ ವಿಳಾಸವನ್ನು ತಪ್ಪದೇ ಅರ್ಜಿಯಲ್ಲಿ ನಮೂದಿಸುವುದು.

ಸುಮಂಗಲ. ವಿ 16/12
ನಿರ್ದೇಶಕರು
(ಇತರೆ ಪರೀಕ್ಷೆಗಳು)

**ಗೆ,**
ಡ್ರಾಯಿಂಗ್ ಗ್ರೇಡ್ ಪರೀಕ್ಷೆಯ ಪರೀಕ್ಷಾ ಕೇಂದ್ರ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ ರವಾನಿಸಿದೆ.

**ಪ್ರತಿಯನ್ನು ಮಾಹಿತಿ ಹಾಗೂ ಅಗತ್ಯ ಕ್ರಮಕ್ಕಾಗಿ.**

1. ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಆಡಳಿತ) ರವರಿಗೆ.
2. ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಅಭಿವೃದ್ಧಿ) ರವರಿಗೆ.
3. ರಾಜ್ಯದ ಎಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯ ವಲಯ ಕ್ಷೇತ್ರ ಶಿಕ್ಷಣಾಧಿಕಾರಿಗಳು ರವರಿಗೆ
4. ಕಛೇರಿ ಪ್ರತಿ.

Scanned by CamScanner